# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(1)ಪಿಆರ್/ಆರ್‌ಟಿಐ/95/2017–18

ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: ೯. ೧. ೨೦೧೯

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಕಾಯ್ದೆ–2005 ಅಡಿಯಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರಿಗಳನ್ನು ನೇಮಿಸಿರುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಸಮಸಂಖ್ಯೆಯ ಅಧಿಸೂಚನೆ ದಿನಾಂಕ: 07–08–2017.

2) ಮಾನ್ಯ ಕರ್ನಾಟಕ ಮಾಹಿತಿ ಆಯೋಗದಲ್ಲಿ ನಡೆದ ಸಭೆಯ ದಿನಾಂಕ: 22–12–2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ, ಮಾಹಿತಿ ಹಕ್ಕು ಅಧಿನಿಯಮದಡಿಯಲ್ಲಿ ಸಾರ್ವಜನಿಕರು ಕೋರುವ ಮಾಹಿತಿಗಳನ್ನು ಒದಗಿಸುವ ಸಲುವಾಗಿ, ಮಾಹಿತಿ ಹಕ್ಕು ಅಧಿನಿಯಮ–2005ರ ಸೆಕ್ಷನ್ 5(1)ರ ಅಡಿಯಲ್ಲಿ ಈಗಾಗಲೇ 502 ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು 145 ಮೇಲ್ಮನವಿ ಪ್ರಾಧಿಕಾರಿಗಳನ್ನು ನೇಮಕ ಮಾಡಿ ಉಲ್ಲೇಖ–(1)ರಂತೆ ಅಧಿಸೂಚನೆ ಹೊರಡಿಸಿ ಈಗಾಗಲೇ ಪಾಲಿಕೆಯ ಅಧಿಕೃತ www.bbmp.gov.in ನಲ್ಲಿ ಪ್ರಚುರಪಡಿಸಲಾಗಿರುತ್ತದೆ. ಮುಂದುವರೆದು, ಕರ್ನಾಟಕ ಮಾಹಿತಿ ಹಕ್ಕು ಅಧಿನಿಯಮ–2005ರಡಿಯಲ್ಲಿ ಸಾರ್ವಜನಿಕರಿಗೆ ನಿಗಧಿತ ಸಮಯದಲ್ಲಿ ಮಾಹಿತಿಯನ್ನು ಒದಗಿಸಲು ಅನುವಾಗುವಂತೆ ಈ ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಸುತ್ತೋಲೆ ಮೂಲಕ ತಿಳಿಸಿದೆ.

1) ಮಾಹಿತಿ ಹಕ್ಕು ಕಾಯ್ದೆ 2005ರ ಪ್ರಕರಣ 5(1)ರಡಿಯಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ತಮ್ಮ ಕಛೇರಿಯ ಮುಂಭಾಗದಲ್ಲಿ ನಾಮಫಲಕವನ್ನು ಸಾರ್ವಜನಿಕರಿಗೆ ಕಾಣುವ ಹಾಗೇ ತಮ್ಮ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿ ಹೆಸರು, ದೂರವಾಣಿ ಸಂಖ್ಯೆ ಹಾಗೂ ವಿಳಾಸದ ವಿವರಗಳೊಂದಿಗೆ ಪ್ರಕಟಿಸುವುದು.

2) ಮಾನ್ಯ ಕರ್ನಾಟಕ ಮಾಹಿತಿ ಆಯೋಗದಲ್ಲಿ ದಾಖಲಾದ ಪ್ರಕರಣದಲ್ಲಿ ಪ್ರತಿವಾದಿಗಳಾಗಿರುವ ಸಂಬಂಧಪಟ್ಟ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಖುದ್ದಾಗಿ ಹಾಜರಾಗುವುದು, ಯುಕ್ತ ಕಾರಣಗಳಿಂದಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಜರಾಗಲು ಸಾಧ್ಯವಾಗದಿದ್ದಲ್ಲಿ ತಮ್ಮ ಪರವಾಗಿ ಹಾಜರಾಗಲು ಮಾಹಿತಿ ಬಲ್ಲ ಒಬ್ಬ ಜವಾಬ್ದಾರಿಯುತ ಅಧಿಕಾರಿಯನ್ನು ನಿಯೋಜಿಸಿ ಅಧಿಕಾರ ಪತ್ರವನ್ನು ತಪ್ಪದೇ ನೀಡುವುದು. ಯಾವುದೇ ಕಾರಣಕ್ಕಾಗಿ ಕೆಳ ಹಂತದ ಸಿಬ್ಬಂದಿಗಳನ್ನು ನಿಯೋಜಿಸುವುದಲ್ಲ.

3) ಮಾಹಿತಿ ಹಕ್ಕು ಅಧಿನಿಯಮದಲ್ಲಿ ಬಂದಿರುವ ಅರ್ಜಿಗಳಿಗೆ ಸಂಬಂಧಿಸಿದಂತೆ ಸ್ವೀಕರಿಸಲಾದ, ವಿಲೇವಾರಿ ಮಾಡಲಾದ ಮತ್ತು ಬಾಕಿ ಇರುವ ಅರ್ಜಿಗಳ ವಿವರಗಳನ್ನು ಪಾಲಿಕೆಯ ಅಧಿಕೃತ ವೈಬ್‌ಸೈಟ್‌ನಲ್ಲಿ ಅಳವಡಿಸುವುದು.

4) ಮಾನ್ಯ ಕರ್ನಾಟಕ ಮಾಹಿತಿ ಆಯೋಗವು ಆದೇಶದಂತೆ ಮಾಹಿತಿ ಒದಗಿಸದ ಪ್ರಕರಣಗಳಲ್ಲಿ ವಿಧಿಸಲಾಗುವ ದಂಡ ಮೊತ್ತವನ್ನು ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಆಯಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ವೇತನದಲ್ಲಿ ಕಟಾವು ಜಮೆ ಮಾಡಿ ವರದಿಯನ್ನು ತಪ್ಪದೇ ಮಾನ್ಯ ಕರ್ನಾಟಕ ಮಾಹಿತಿ ಆಯೋಗಕ್ಕೆ ಸಲ್ಲಿಸುವುದು.

5) ಮಾಹಿತಿ ಹಕ್ಕು ಅಧಿನಿಯಮ–2005ರ ಸೆಕ್ಷನ್ 5(1)ರ ಅಡಿಯಲ್ಲಿ ಈಗಾಗಲೇ 502 ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು 145 ಮೇಲ್ಮನವಿ ಪ್ರಾಧಿಕಾರಿಗಳನ್ನು ನೇಮಕ ಮಾಡಿ ಅಧಿಸೂಚನೆ ಹೊರಡಿಸಲಾಗಿರುವುದರಿಂದ ಸದರಿ ಅಧಿಸೂಚನೆಯನ್ನು ಕಛೇರಿಯ ಮುಂಭಾಗದ ನಾಮಫಲಕದಲ್ಲಿ ಪ್ರಚುರಪಡಿಸಲು ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ ಸೂಚಿಸಿದೆ.

ಸಹಿ/-  9/1/19
ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

: ವಿಶೇಷ ಆಯುಕ್ತರು (ಯೋಜನೆ) / (ಹಣಕಾಸು) / ಅಪರ ಅಯುಕ್ತರು (ಆಡಳಿತ) ರವರಿಗೆ ಕಳುಹಿಸಿದೆ.

: ಉಪ ಆಯುಕ್ತರು (ಆಡಳಿತ) ರವರಿಗೆ ಕಳುಹಿಸಿದೆ.

: ಎಲ್ಲಾ ವಲಯ ಅಪರ/ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.

: ಮಾನ್ಯ ರಾಜ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ ಮಾಹಿತಿ ಸೌಧ, ದೇವರಾಜ್ ಅರಸ್ ರಸ್ತೆ, ವಿಧಾನ ಸೌಧದ ಪಶ್ಚಿಮ ದ್ವಾರ–2 ಎದುರು, ಬೆಂಗಳೂರು–560001 ರವರಿಗೆ ಮಾಹಿತಿಗೆ ಕಳುಹಿಸಿದೆ.

: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.

: ಎಲ್ಲಾ ಕಛೇರಿ ಮುಖ್ಯಸ್ಥರುಗಳಿಗೆ ಕಳುಹಿಸಿದೆ.

: ಎಲ್ಲಾ ಮೇಲ್ಮನವಿ / ಅಪೀಲು ಪ್ರಾಧಿಕಾರಿಗಳಿಗೆ ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಕಳುಹಿಸುತ್ತಾ, ಮೇಲ್ಕಂಡ ಸೂಚನೆಗಳನ್ನು ಚಾಚು ತಪ್ಪದೇ ಪಾಲಿಸಲು ಸೂಚಿಸಿದೆ.

: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸಲು ಸೂಚಿಸಿದೆ.

: ಸಾರ್ವಜನಿಕ ಮಾಹಿತಿ ಅಧಿಕಾರಿಯವರಿಗೆ ಅಗತ್ಯ ಕ್ರಮಕ್ಕೆ ಕಳುಹಿಸಿದೆ.

: ಕಛೇರಿ ಪ್ರತಿ.